ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ಹಿರಿಯ ಸಹಾಯಕ ನಿರ್ದೇಶಕ ಕಚೇರಿ ರಾಯಚೂರು –584101,ದೂರವಾಣಿ: 08532–226050,
ಇ–ಮೇಲ್: varthabhavanraichur@gmail.com

13ನೇ ಜುಲೈ 2017

# ನಮ್ಮದು ರೈತ ಪರ ಸರ್ಕಾರ–ನುಡಿದಂತೆ ನಡೆದಿದ್ದೇವೆ
# – ಸಿಎಂ ಸಿದ್ದರಾಮಯ್ಯ



ರಾಯಚೂರು, ಜುಲೈ,13.– ನಮ್ಮ ಸರ್ಕಾರ ರೈತರ ಪರವಾಗಿದ್ದು, ರೈತರ ಬೇಡಿಕೆಗಳನ್ನು ಈಡೇರಿಸಬೇಕೆಂಬುದೇ ನಮ್ಮ ಉದ್ದೇಶವಾಗಿದೆ. ರೈತರ ಪರವಾಗಿ ಅನೇಕ ಕಾರ್ಯಕ್ರಮಗಳನ್ನು ಜಾರಿಗೆ ತರಲಾಗಿದೆ. ಉಳಿದ ತಮ್ಮ ಅವಧಿಯಲ್ಲೂ ನೀರಾವರಿ ಸೇರಿದಂತೆ ರೈತ ಪರವಾಗಿರುವ ಇನ್ನಷ್ಟು ಯೋಜನೆಗಳಿಗೆ ಆದ್ಯತೆ ನೀಡಲಾಗುವುದು ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಹೇಳಿದ್ದಾರೆ.

ರಾಯಚೂರು ಜಿಲ್ಲೆಯ ಲಿಂಗಸೂಗೂರು ತಾಲೂಕಿನ ತೊಂಡಿಹಾಳ ಗ್ರಾಮದಲ್ಲಿ ಕೃಷ್ಣಭಾಗ್ಯ ಜಲ ನಿಗಮ ನಿಯಮಿತ ವತಿಯಿಂದ ಇಂದು ನಡೆದ ನಂದವಾಡಗಿ ಏತನೀರಾವರಿ ಯೋಜನೆಯ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡುತ್ತಿದ್ದರು.

ಹಾಗೆಯೇ ಬಡವರ, ಹಿಂದುಳಿದವರ, ದಲಿತರ, ಮಹಿಳೆಯರ ಪರವಾಗಿಯೂ ಇದ್ದು, ಈ ಮೂಲಕ ನಮ್ಮ ಸರ್ಕಾರ ನುಡಿದಂತೆ ನಡೆಯುತ್ತಿದೆ ಎಂದು ಅವರು ಹೇಳಿದರು.

ತಾವು ಅಧಿಕಾರಕ್ಕೆ ಬಂದ ಮೇಲೆ ನೀರಾವರಿಗೆ ಪ್ರತಿವರ್ಷ 10 ಸಾವಿರ ಕೋಟಿ ರೂಪಾಯಿ ನೀಡುತ್ತಿದ್ದು, ಇದುವರೆಗೆ 40 ಸಾವಿರ ಕೋಟಿ ರೂಪಾಯಿ ಹಣ ಖರ್ಚು ಮಾಡಲಾಗಿದೆ. ಸರ್ಕಾರ 5 ವರ್ಷ ಪೂರೈಸುವದರೊಳಗೆ ಸುಮಾರು 55 ಸಾವಿರ ಕೋಟಿ ಹಣವನ್ನು ನೀರಾವರಿಗಾಗಿ ಖರ್ಚು ಮಾಡಲಾಗುವುದು ಎಂದರು.

ಈ ಭಾಗದ ರೈತರು ಹಾಗೂ ರೈತ ಮುಖಂಡರು ಹೋರಾಟ ಮಾಡಿದರ ಫಲವಾಗಿ ಇಂದು ರಾಯಚೂರು ಜಿಲ್ಲೆಯ ಲಿಂಗಸೂಗೂರು, ಮಾನ್ವಿ ಹಾಗೂ ಬಾಗಲಕೋಟೆ ಜಿಲ್ಲೆಯ ಹುನಗುಂದ ತಾಲೂಕಿನ 89,205 ಎಕರೆ ನೀರಾವರಿ ಯೋಜನೆಯ ಲಾಭವಾಗಲಿದೆ. 2013–14ರಲ್ಲಿ ನಾನು ಈ ಯೋಜನೆ ಘೋಷಣೆ ಮಾಡಿದ್ದೆ. 2014ರಲ್ಲಿ ಮಂಜೂರಾತಿ ನೀಡಿದ್ದೆ. ಈಗಾಗಲೇ ಪರಿಸರ ಇಲಾಖೆಯ ಅನುಮೋದನೆ ಸಿಕ್ಕಿದೆ. ಈ ಯೋಜನೆಗೆ 1530 ಕೋಟಿ ರೂಪಾಯಿ ಖರ್ಚು ಮಾಡಲಾಗುತ್ತಿದೆ ಎಂದು ಅವರು ಹೇಳಿದರು.

ಸಿಎಂ ಅವರು ಭಾಷಣ ಆರಂಭಿಸುತ್ತಿದ್ದಂತೆ ಜೋರಾಗಿ ಮಳೆ ಸುರಿಯ ತೊಡಗಿದಾಗ, ಮಳೆ ಸುರಿಯುತ್ತಿರುವುದು ಶುಭ ಸೂಚನೆ ಎಂದ ಅವರು, ಸಮೃದ್ಧವಾಗಿ ಮಳೆ ಬರಲೆಂದು ನಾನು ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದರು.

ಕಳೆದ ವರ್ಷಕ್ಕಿಂತ ಈ ಬಾರಿ ಮಳೆ ಕಡಿಮೆ ಪ್ರಮಾಣದಲ್ಲಿ ಆಗಿರುವುದರಿಂದ ಕೆಲವೊಂದು ಜಲಾಶಯಗಳಲ್ಲಿ ನೀರಿನ ಮಟ್ಟ ಕಡಿಮೆ ಇದೆ ಎಂದು ಅವರು ವಿಷಾದ ವ್ಯಕ್ತಪಡಿಸಿದರು.

ರೈತರ ಕಷ್ಟ ಮನಗಂಡು 50 ಸಾವಿರವರೆಗಿನ ಸಹಕಾರ ಸಂಘಗಳ ಸಾಲವನ್ನು ಮಾಡಿದ್ದೇನೆ. ಆದರೆ, ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರಕ್ಕೆ ಸಾಕಷ್ಟು ಬಾರಿ ಮನವಿ ಮಾಡಿದರೂ, ರಾಷ್ಟ್ರೀಕೃತ ಬ್ಯಾಂಕ್‌ಗಳ ಸಾಲಮನ್ನಾ ಮಾಡಲಿಲ್ಲ ಎಂದು ಅವರು ನೋವಿನಿಂದ ನುಡಿದರು.

ರಾಜ್ಯ ಜಲಸಂಪನ್ಮೂಲ ಸಚಿವರಾದ ಎಂ.ಬಿ.ಪಾಟೀಲ್ ಅವರು ಮಾತನಾಡಿ, ಈ ಭಾಗದ ಅನೇಕ ದಶಕಗಳ ಬೇಡಿಕೆಯಾದ ನಂದವಾಡಗಿ ಏತನೀರಾವರಿ ಯೋಜನೆಯ ಶಂಕುಸ್ಥಾಪನೆಯಿಂದ ಈ ಭಾಗದ ರೈತರಿಗೆ ಅನುಕೂಲವಾಗಲಿದೆ. ಹಾಗೆಯೇ ಈ ಭಾಗದ ಇನ್ನಷ್ಟು ನೀರಾವರಿ ಯೋಜನೆಗಳನ್ನು ಕೈಗೊಳ್ಳಲಾಗುವುದು ಎಂದರು.

ಈ ಹಿಂದಿನ ಸರ್ಕಾರ ನೀರಾವರಿಗೆ 18 ಸಾವಿರ ಕೋಟಿ ರೂಪಾಯಿ ಮಾತ್ರ ಖರ್ಚು ಮಾಡಿತ್ತು. ಆದರೆ ನಮ್ಮ ಸರ್ಕಾರ ಇದರ ಮೂರು ಪಟ್ಟು ಹಣವನ್ನು ನೀರಾವರಿಗಾಗಿ ಖರ್ಚು ಮಾಡುತ್ತಿದೆ ಎಂದು ಅವರು ಹೇಳಿದರು.

ಸಮಾರಂಭದಲ್ಲಿ ರಾಯಚೂರು ಸಂಸದ ಬಿ.ವಿ.ನಾಯಕ್, ಕೊಪ್ಪಳ ಸಂಸದರಾದ ಸಂಗಣ್ಣ ಕರಡಿ, ಮಸ್ಕಿ ಶಾಸಕರಾದ ಪ್ರತಾಪ್‌ಗೌಡ ಪಾಟೀಲ್, ಲಿಂಗಸೂಗೂರು ಶಾಸಕರಾದ ಮಾನಪ್ಪ ಡಿ.ವಜ್ಜಲ್, ಹುನಗುಂದ ಶಾಸಕ ವಿಜಯಾನಂದ್ ಎಸ್. ಕಾಶಪ್ಪನವರ್, ರಾಯಚೂರು ಜಿ.ಪಂ ಆಧ್ಯಕ್ಷರಾದ ಆದಿಮನಿ ವೀರಲಕ್ಷ್ಮಿ, ಬಾಗಲಕೋಟೆ ಜಿ.ಪಂ. ಅಧ್ಯಕ್ಷರಾದ ವೀಣಾ. ವಿ ಕಾಶಪ್ಪನವರ್, ಹಟ್ಟಿ ಚಿನ್ನದಗಣಿ ನಿಗಮದ ಅಧ್ಯಕ್ಷ ಬಿ.ಆರ್.ಯಾವಗಲ್, ಜಿಲ್ಲಾಧಿಕಾರಿ ಡಾ. ಬಗಾದಿ ಗೌತಮ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಶಾ ಜೇಮ್ಸ್, ತಾ.ಪಂ ಅಧ್ಯಕ್ಷರು ಹಾಗೂ ಸದಸ್ಯರು, ನಂದವಾಡಗಿ ಹಾಗೂ ಹಲ್ಕಾವಟಗಿ ಗ್ರಾಮ ಪಂಚಾಯ್ತಿ ಅಧ್ಯಕ್ಷರು ಹಾಗೂ ಸದಸ್ಯರು ಮುಂತಾದವರು ಭಾಗವಹಿಸಿದ್ದರು.

ಕೃಷ್ಣಭಾಗ್ಯ ಜಲ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರಾದ ಅಜುಂ ಪರ್ವೇಜ್ ಅವರು ಸ್ವಾಗತಿಸಿದರು. ಕೃಷ್ಣಭಾಗ್ಯ ಜಲ ನಿಗಮ ನಿಯಮಿತದ ಮುಖ್ಯ ಇಂಜಿನಿಯರ್ ಹೆಚ್.ಕೆ. ಕೃಷ್ಣೇಗೌಡ ಅವರು ವಂದಿಸಿದರು. ಶಿಕ್ಷಕರಾದ ದಂಡಪ್ಪ ಬಿರಾದಾರ ಅವರು ಕಾರ್ಯಕ್ರಮ ನಿರೂಪಿಸಿದರು.

---------------------